# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | | **385 (535)** |
| **ಸದಸ್ಯರ ಹೆಸರು** | | **ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)** |
| **ಉತ್ತರಿಸಬೇಕಾದ ದಿನಾಂಕ** | | **19-02-2024** |
| **ಉತ್ತರಿಸಬೇಕಾದ ಸಚಿವರು** | | **ಉನ್ನತ ಶಿಕ್ಷಣ ಸಚಿವರು** |
| **ಪ್ರಶ್ನೆ** | | **ಉತ್ತರ** |
| ಅ) | ಸರ್ಕಾರಿ ಪದವಿ ಕಾಲೇಜು ಹಾಗೂ ವಿಶ್ವವಿದ್ಯಾನಿಲಯಗಳಲ್ಲಿ ಅತಿಥಿ ಉಪನ್ಯಾಸಕರಾಗಿ ದೀರ್ಘಕಾಲದಿಂದ ಕಾರ್ಯನಿರ್ವಹಿಸುತ್ತಿರುವವರಿಗೆ ಸೇವಾ ಭದ್ರತೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿರುತ್ತದೆ.<br><br>ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಅತಿಥಿ ಉಪನ್ಯಾಸಕರನ್ನು ಯಾವುದೇ ಖಾಲಿ ಹುದ್ದೆಗಳ ಎದುರಾಗಿ ನೇಮಕಾತಿ ಮಾಡಲಾಗುವುದಿಲ್ಲ. ಬದಲಾಗಿ, ಕಾಲೇಜುಗಳಲ್ಲಿ ಲಭ್ಯವಾಗುವ ಕಾರ್ಯಭಾರವನ್ನು ಮೊದಲು ಖಾಯಂ ಉಪನ್ಯಾಸಕರಿಗೆ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರಕ್ಕೆ ಮಾತ್ರ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಲಾಗುತ್ತದೆ. ಆದ್ದರಿಂದ ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉನ್ಯಾಸಕರಿಗೆ ಸೇವಾ ಭದ್ರತೆ ನೀಡಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.<br><br>ವಿಶ್ವವಿದ್ಯಾಲಯಗಳಲ್ಲಿ ಸರ್ಕಾರದಿಂದ ಮಂಜೂರಾಗಿರುವ ಹುದ್ದೆಗಳಿಗೆ/ಸೃಜನೆಯಾಗಿರುವ ಹುದ್ದೆಗಳಿಗೆ ಎದುರಾಗಿ ಖಾಲಿಯಿರುವ ಹುದ್ದೆಗಳಿಗೆ ತಮ್ಮ ಆಂತರಿಕ ಸಂಪನ್ಮೂಲದ ಲಭ್ಯತೆಗೆ ಅನುಗುಣವಾಗಿ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಂಡು ನಿರ್ವಹಿಸುತ್ತವೆ. ದಿನಾಂಕ:28.01.2019 ಶೈಕ್ಷಣಿಕ ಚಟುವಟಿಕೆಗಳನ್ನು ವಿಶ್ವವಿದ್ಯಾಲಯಗಳು ಯುಜಿಸಿ ಹೊರಡಿಸಿರುವ ಮಾರ್ಗಸೂಚಿಯಲ್ಲಿ ತಿಳಿಸಲಾದಂತೆ ಪ್ರತಿ ಉಪನ್ಯಾಸಕರಿಗೆ ರೂ.1500/- ರಂತೆ ಪ್ರತಿ ತಿಂಗಳಿಗೆ ಗರಿಷ್ಠ ರೂ. 50,000/-ಗಳು ಮೀರದಂತೆ ಗೌರವಧನವನ್ನು ನಿಗದಿಪಡಿಸಲಾಗಿರುತ್ತದೆ ಹಾಗೂ ಖಾಯಂ ಪ್ರಾಧ್ಯಾಪಕರುಗಳಿಗೆ ನೀಡುವ ಪಿಂಚಣಿ, ಗ್ರಾಚ್ಯುಟಿ, ರಜೆ ಹಾಗೂ ಇನ್ನಿತರೆ ಸೌಲಭ್ಯಗಳನ್ನು ಅತಿಥಿ ಉಪನ್ಯಾಸಕರಿಗೆ ನೀಡಲು ಅವಕಾಶವಿರುವುದಿಲ್ಲವೆಂದು ತಿಳಿಸಿರುತ್ತದೆ.<br><br>ಈ ಮಾರ್ಗಸೂಚಿಯನ್ವಯ ವಿಶ್ವವಿದ್ಯಾಲಯಗಳು ಗೌರವಧನವನ್ನು, ಸಾರ್ವಜನಿಕ ಉಪನ್ಯಾಸಕರುಗಳಿಗೆ ವಿದ್ಯಾರ್ಹತೆ ಹಾಗೂ ಕಾರ್ಯಭಾರಕ್ಕನುಗುಣವಾಗಿ ಪಾವತಿಸುತ್ತಿರುತ್ತವೆ. |
| ಆ) | ಸದರಿಯವರಿಗೆ ಯಾವುದೇ ರೀತಿಯ ರಜೆ ಸೌಲಭ್ಯ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ತಾತ್ಕಾಲಿಕ ವ್ಯವಸ್ಥೆಯಡಿ ಹೆಚ್ಚುವರಿ ಕಾರ್ಯಭಾರ ಕ್ಕನುಗುಣವಾಗಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ರಜೆ ಸೌಲಭ್ಯ ನೀಡಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.<br><br>ಪ್ರಸ್ತುತ, ಅತಿಥಿ ಉಪನ್ಯಾಸಕರಿಗೆ ತಿಂಗಳಿಗೆ 01 ದಿನ ಸಾಂದರ್ಭಿಕ ರಜೆಯನ್ನು ನೀಡುವ ಬಗ್ಗೆ ಹಾಗೂ ಮಹಿಳಾ ಅತಿಥಿ ಉಪನ್ಯಾಸಕರಿಗೆ 90 ದಿನಗಳ ವೇತನ ಸಹಿತ ಮಾತೃತ್ವ ರಜೆಯನ್ನು ನೀಡುವ ಬಗ್ಗೆ ಪ್ರಸ್ತಾವನೆ ಸ್ವೀಕೃತಗೊಂಡಿದ್ದು, ಪರಿಶೀಲನೆಯಲ್ಲಿರುತ್ತದೆ. |
| ಇ) | ಸದರಿಯವರ ಶೈಕ್ಷಣಿಕ ವರ್ಷದ ನೇಮಕಾತಿಯನ್ನು 10 ತಿಂಗಳ ಬದಲು 12 ತಿಂಗಳ ಅವಧಿಗೆ | ವಿಶ್ವವಿದ್ಯಾಲಯಗಳ ಶೈಕ್ಷಣಿಕ ವೇಳಾಪಟ್ಟಿಯನ್ವಯ ಆಯಾ ಶೈಕ್ಷಣಿಕ ಸಾಲಿನಲ್ಲಿ/ವರ್ಷದಲ್ಲಿ 10 ತಿಂಗಳಿಗೆ ಶೈಕ್ಷಣಿಕ ಚಟುವಟಿಕೆಗಳನ್ನು ನಿಗದಿಪಡಿಸಿಕೊಂಡಿರುವ ಹಿನ್ನೆಲೆಯಲ್ಲಿ |

| | | |
|---|---|---|
| | ನೇಮಕ ಮಾಡಲು ಇರುವ ತೊಂದರೆಗಳೇನು; | ಅತಿಥಿ ಉಪನ್ಯಾಸಕರನ್ನು 10 ತಿಂಗಳಿಗೆ ಮಾತ್ರ ನೇಮಕ ಮಾಡಿಕೊಳ್ಳಲಾಗುತ್ತಿದೆ. |
| ಈ) | ಯು.ಜಿ.ಸಿ. ನಿಯಮಾವಳಿ ಯಂತೆ ಕನಿಷ್ಠ ವೇತನ ನೀಡದೆ ಇರಲು ಕಾರಣಗಳೇನು: | ಇಲಾಖೆಯಲ್ಲಿ ಅತಿಥಿ ಉಪನ್ಯಾಸಕರನ್ನು ಯಾವುದೇ ಖಾಲಿ ಹುದ್ದೆಗಳ ಎದುರಾಗಿ ನೇಮಕಾತಿ ಮಾಡಲಾಗುವುದಿಲ್ಲ. ಬದಲಾಗಿ, ಕಾಲೇಜುಗಳಲ್ಲಿ ಲಭ್ಯವಾಗುವ ಕಾರ್ಯಭಾರವನ್ನು ಮೊದಲು ಖಾಯಂ ಉಪನ್ಯಾಸಕರಿಗೆ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರಕ್ಕೆ ಮಾತ್ರ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಲಾಗುತ್ತದೆ. ಅಲ್ಲದೆ, ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಲ್ಲಿ ಅವರು ಈ ಹಿಂದೆ ಸರ್ಕಾರಿ ಕಾಲೇಜುಗಳಲ್ಲಿ ಸಲ್ಲಿಸಿದ ಸೇವಾ ಅವಧಿಯನ್ನು ಆಧ್ಯತೆ ಮೇರೆಗೆ ಪರಿಗಣಿಸಲಾಗುತ್ತದೆ.<br><br>ಈ ಹಿನ್ನೆಲೆಯಲ್ಲಿ ಇಲಾಖೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹೆಚ್ಚುವರಿ ಕಾರ್ಯಭಾರಕ್ಕೆ ಅನುಗುಣವಾಗಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಯು.ಜಿ.ಸಿ. ನಿಯಮಾವಳಿಯಂತೆ ವೇತನ ಪಾವತಿಸಲು ಅವಕಾಶವಿರುವುದಿಲ್ಲ.<br><br>ಯುಜಿಸಿ ಮಾರ್ಗಸೂಚಿಯನ್ವಯ ಸಾರ್ವಜನಿಕ ವಿಶ್ವವಿದ್ಯಾಲಯಗಳು ಗೌರವಧನವನ್ನು ಉಪನ್ಯಾಸಕರುಗಳಿಗೆ ವಿದ್ಯಾರ್ಹತೆ ಹಾಗೂ ಕಾರ್ಯಭಾರಕ್ಕನುಗುಣವಾಗಿ ಪಾವತಿಸುತ್ತಿರುತ್ತವೆ. |
| ಉ) | ಯಾವ ಕಾಲಮಿತಿಯಲ್ಲಿ ಸೇವಾ ಭದ್ರತೆ, ರಜೆ ಸೌಲಭ್ಯ ಹಾಗೂ ಕನಿಷ್ಠ ವೇತನ ನೀಡಲಾಗುವುದು? (ವಿವರ ನೀಡುವುದು) | ಸರ್ಕಾರದ ಆದೇಶ ಸಂಖ್ಯೆ:ಇಡಿ 242 ಡಿಸಿಇ 2021, ದಿನಾಂಕ:14.01.2022 ಮತ್ತು 24.01.2022 ರನ್ವಯ ಅತಿಥಿ ಉಪನ್ಯಾಸಕರಿಗೆ ಈ ಹಿಂದೆ ನೀಡಲಾಗುತ್ತಿದ್ದ ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಈ ಕೆಳಗಿನಂತೆ ಪರಿಷ್ಕರಿಸಲಾಗಿದೆ.<br><br>ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/-<br>ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/-<br>ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/-<br>ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/-<br><br>ಮುಂದುವರೆದು, ಅತಿಥಿ ಉಪನ್ಯಾಸಕರ ಕೆಲವು ಬೇಡಿಕೆಗಳ ಕುರಿತಂತೆ ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ. |

ಇಡಿ 56 ಡಿಸಿಇ 2024 (ಇ)

(ಡಾ: ಎಂ.ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು